ಸಂಧ್ಯಾ ಸುರಕ್ಷಾ ಯೋಜನೆ

938 ಶ್ರೀ ಕಿಮ್ಮನೆ ರತ್ನಾಕರ್ : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಂಧ್ಯಾ ಸುರಕ್ಷಾ ಯೋಜನೆಯಡಿಯಲ್ಲಿ ಶಿಕಾರಿಪುರ ಮತ್ತು ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಸಲ್ಲಿಸಲಾದ ಅರ್ಜಿಗಳೆಷ್ಟು;

ಆ) ಅವುಗಳಲ್ಲಿ ಶಿಕಾರಿಪುರ ಮತ್ತು ತೀರ್ಥಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರತ್ಯೇಕವಾಗಿ ಮಂಜೂರಾದ ಸಂಧ್ಯಾ ಸುರಕ್ಷಾ ಅರ್ಜಿಗಳೆಷ್ಟು;

ಪ್ರತ್ಯೇಕವಾಗಿ ಮಂಜೂರಾತಿಗಾಗಿ ಬಾಕಿ ಉಳಿದ ಅರ್ಜಿಗಳೆಷ್ಟು;

ಇ) ಸಂಧ್ಯಾ ಸುರಕ್ಷಾ ಯೋಜನೆಯಡಿಯಲ್ಲಿ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ತಿರಸ್ಕರಿಸಲ್ಪಟ್ಟ ಅರ್ಜಿಗಳೆಷ್ಟು?

ಶ್ರೀ ಜೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಸಂಧ್ಯಾ ಸುರಕ್ಷಾ ಯೋಜನೆಯಡಿ ಶಿಕಾರಿಪುರ ವಿಧಾನ ಸಭಾ ಕೇತ್ರದಲ್ಲಿ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ: 11043 ಮತ್ತ ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ: 7834.

ಆ) ಶಿಕಾರಿಪುರ ವಿಧಾನ ಸಭಾ ಕ್ಷೇತ್ರದಲ್ಲಿ 6560 ಮತ್ತು ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 2289 ಅರ್ಜಿಗಳು ಸಂಧ್ಯಾ ಸುರಕ್ಷಾ ಯೋಜನೆಯಡಿ ಮಂಜೂರಾಗಿರುತ್ತವೆ.

ಶಿಕಾರಿಪುರ ವಿಧಾನ ಸಭಾ ಕ್ಷೇತ್ರದಲ್ಲಿ 650 ಮತ್ತು ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ 264 ಅರ್ಜಿಗಳು ಮಂಜೂರಾತಿಗಾಗಿ ಬಾಕಿ ಉಳಿದಿರುತ್ತವೆ.

ಇ) ತೀರ್ಥಹಳ್ಳಿ ವಿಧಾನ ಸಭಾ ಕ್ಷೇತ್ರದಲ್ಲಿ ತಿರಸ್ಕರಿಸಲ್ಪಟ್ಟ ಅರ್ಜಿಗಳ ಒಟ್ಟು ಸಂಖ್ಯೆ: 5281.

88 ಶ್ರೀ ಎಂ.ಟಿ.ಕೃಷ್ಣಪ್ಪ : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತುಮಕೂರು ಜಿಲ್ಲೆ ತುರುವೇಕೆರೆ ಕ್ಷೇತ್ರದಲ್ಲಿ ಶಿಂಷಾನದಿಯ ನೀರು ತುರುವೇಕೆರೆಯಿಂದ ಯಡಿಯೂರು ಕಡೆಗೆ ಹರಿಯುತ್ತಿದ್ದು, ಇಕ್ಕೆಲಗಳಲ್ಲಿ ಕೊರೆತ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ, ಈ ಕೊರೆತವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?